# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲ್ಲೂಕಿನ ಅಂತರಗಂಗೆ ಮತ್ತು ಇತರೆ 29 ಜನವಸತಿಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂ:ಗ್ರಾಕುನೀ&ನೈಇ 30 ಗ್ರಾನೀಸ(5)2019 ದಿನಾಂಕ:28.10.2019.
2. ದಿನಾಂಕ:10.02.2021ರಂದು ನಡೆದ ಟೆಂಡರ್ ಅಂಗೀಕಾರ ಸಮಿತಿ (TAA) ಸಭೆಯ ನಡವಳಿಗಳು.
3. ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ ಇಲಾಖೆರವರ ಇ-ಆಫೀಸ್ ಕಡತ ಸಂ:RDWSD-TECHOMISC/16/2021

---

**ಪೀಠಿಕೆ:**

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲ್ಲೂಕಿನ ಅಂತರಗಂಗೆ ಮತ್ತು ಇತರೆ 29 ಜನವಸತಿಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಅಂದಾಜಿಗೆ ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ರೂ.1808.00ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮೇಲೆ (2)ರಲ್ಲಿ ಓದಲಾದ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆ ತೀರ್ಮಾನದನ್ವಯ ರೂ.1950.00ಲಕ್ಷಗಳಿಗೆ ಟೆಂಡರ್ ಮುಖೇನ ಕಾಮಗಾರಿ ಅನುಷ್ಠಾನಗೊಳಿಸಲು ಅನುಮತಿಸಲಾಗಿದೆ.

ಟೆಂಡರ್‌ಗಿಟ್ಟ ಮೊತ್ತವನ್ನು 2018-19ನೇ ಸಾಲಿನ ಗ್ರಾ.ಕು.ನೀ&ನೈ ವೃತ್ತ, ಬೆಂಗಳೂರು, ಬೆಳಗಾವಿ, ಕರ್ನಾಟಕ ನಗರ ನೀರು ಮತ್ತು ಒಳಚರಂಡಿ ಮಂಡಳಿ(KUWS&DB), ಲೋಕೋಪಯೋಗಿ ಶಿವಮೊಗ್ಗ ವೃತ್ತ, ಜಲಸಂಪನ್ಮೂಲ ಇಲಾಖೆ, ಸಣ್ಣ ನೀರಾವರಿ ಇಲಾಖೆಗಳ ಮತ್ತು 2014-15ನೇ ಸಾಲಿನ BWSSB, ಬೆಂಗಳೂರುರವರ ದರಗಳ (Scheduled Rate) ಆಧಾರದ ಮೇಲೆ ಪರಿಗಣಿಸಲಾಗಿತ್ತು. ಟೆಂಡರ್ ಅನುಮೋದನೆ ಮಾಡುವಲ್ಲಿ ವಿಳಂಬವಾಗಿರುವುದರಿಂದ ಅಂದಾಜನ್ನು ಚಾಲ್ತಿ ದರಗಳ (SR) ಪ್ರಕಾರ ಪರಿಷ್ಕರಣೆ ಮಾಡಿರುವುದರಿಂದ ಕಾಮಗಾರಿಯ ಅಂದಾಜು ಹೆಚ್ಚಾಗಿರುತ್ತದೆ. ಕಾಮಗಾರಿಯ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯಾಗಿರುವುದಿಲ್ಲ. ದರಗಳ(SR) ಬದಲಾವಣೆ ಹಾಗೂ ಟೆಂಡರ್ ಪ್ರೀಮಿಯಂನಿಂದಾಗಿ ಅಂದಾಜು ಮೊತ್ತದಲ್ಲಿ ಹೆಚ್ಚಳವಾಗಿರುತ್ತದೆ ಮತ್ತು ಸದರಿ ಯೋಜನೆಯ ಮೂಲ ಅಂದಾಜಿನಲ್ಲಿ ಯೋಜನಾ ನಿರ್ವಹಣಾ ಸಮಾಲೋಚಕರನ್ನು (PMC) ನೇಮಿಸಲು ಅವಕಾಶ ಕಲ್ಪಿಸಲಾಗಿರುವುದಿಲ್ಲ. ಆದ್ದರಿಂದ ಯೋಜನಾ ನಿರ್ವಹಣಾ ಸಮಾಲೋಚಕರನ್ನು ನೇಮಿಸುವ ಮೊತ್ತ ಸೇರಿ ಒಟ್ಟು ಯೋಜನೆಯ ಅಂದಾಜು ಮೊತ್ತ **ರೂ.1950.00ಲಕ್ಷಗಳಿಗೆ** ಪರಿಷ್ಕೃತವಾಗಿದೆ.

ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮೇಲೆ (3)ರ ಪ್ರಸ್ತಾವನೆಯಲ್ಲಿ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಶಿವಮೊಗ್ಗ ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ **ಜಲ ಜೀವನ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲ್ಲೂಕಿನ ಅಂತರಗಂಗೆ ಮತ್ತು ಇತರೆ 29 ಜನವಸತಿಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಯನ್ನು **ರೂ.1950.00ಲಕ್ಷ (ಒಂದು ಸಾವಿರದ ಒಂಭೈನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ)** ಗಳ ಅಂದಾಜು ಮೊತ್ತದಲ್ಲಿ ಕಾರ್ಯಗತಗೊಳಿಸುವ ಸಂಬಂಧ **ಜಲ ಜೀವನ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ:**

(ಅ) ಈ ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ, ಸದರಿ ಸಂಸ್ಥೆಯೇ 5 ವರ್ಷಗಳ ಕಾಲ ಈ ಯೋಜನೆಯ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ ಇಲಾಖೆರವರಿಂದ ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2020-21ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನ ಗೊಳಿಸತಕ್ಕದ್ದು.

(ಉ) ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ ಅನುಸಾರವಾಗಿ ಅನುಷ್ಠಾನಗೊಳಿಸತಕ್ಕದ್ದು. ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3ನೇ ವ್ಯಕ್ತಿ ತಪಾಸಣೆ (3rd Party Inspection) ಗೆ ಒಳಪಡಿಸುವುದು.

(ಊ) Bulk Water meter ಹಾಗೂ Household metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ / ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸತಕ್ಕದ್ದು.

(ಋ) ಯೋಜನೆಯು ಅನುಷ್ಠಾನಗೊಂಡು ಗುತ್ತಿಗೆದಾರರ 5 ವರ್ಷಗಳ O&M ನಿರ್ವಹಣಾ ಅವಧಿ ಮುಗಿದ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸತಕ್ಕದ್ದು. ಹಾಗೂ ಗ್ರಾಮಗಳ ಆಂತರಿಕ ನೀರು ಸರಬರಾಜು ವ್ಯವಸ್ಥೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

ಎ) ಸರ್ಕಾರದ ನೀತಿಯನ್ವಯ, ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19/2/2021

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಶಿವಮೊಗ್ಗ.**
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
8. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
9. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಶಿವಮೊಗ್ಗ.**
11. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಬೆಂಗಳೂರು.**
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
14. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
15. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಶಿವಮೊಗ್ಗ.**
16. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬೆಂಗಳೂರು.
17. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
18. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬೆಂಗಳೂರು.
19. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.